# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಎಂ.ಬಿ.ಪಾಟೀಲ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕಂಗ್ರಾಳಿ ಬಿ.ಕೆ. ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM-138/2007/ARE-5, ದಿನಾಂಕ: 04.10.2018

ಪ್ರಸ್ತಾವನೆ:

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 28.09.2018ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ 2004-05ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ವಯ 1) ಶ್ರೀ ಗಜಾನನ ಮನೋಹರ ಪಾಟೀಲ, ಅಂದಿನ ಅಧ್ಯಕ್ಷರು, ಕಂಗ್ರಾಳಿ ಬಿ.ಕೆ. ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಮತ್ತು ಶ್ರೀ ಎಂ.ಬಿ.ಪಾಟೀಲ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕಂಗ್ರಾಳಿ ಬಿ.ಕೆ. ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ (ಇನ್ನು ಮುಂದೆ 'ಎದುರುದಾರರು 1 & 2' ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 7(2) ರನ್ವಯ ತನಿಖೆ ನಡೆಸಿದ್ದು ವರದಿ ಸಲ್ಲಿಸಿರುತ್ತಾರೆ.

ಲೆಕ್ಕ ಪರಿಶೋಧನಾ ವರದಿಯನ್ವಯ ಕೆಳಗಿನ ಆಕ್ಷೇಪಣೆಗಳನ್ನು ಉಲ್ಲೇಖಿಸಿರುವುದಾಗಿ ವರದಿಯಲ್ಲಿ ತಿಳಿಸಿರುತ್ತಾರೆ.

| Sl. No. | Heads | Amount of Audit Objections |
|---|---|---|
| 1 | Expenditure shown on attendance sheet and expenditure made by hand | Rs. 1,56,942/- |
| 2 | Expenditure incurred on Water Supply Bills | Rs. 83,546/- |
| 3 | Grant received under Indira Awaz Scheme | Rs. 10,000/- |
| 4 | Non-Taking of closing stock of food grains for the opening balance for the year 2004-05 | Rs. 3,531/- |
| 5 | Non-deduction of Royalty and Income Tax from the Bills of works | Rs. 8,327 |

ಸದರಿ ನೌಕರರು ದಿನಾಂಕ 30.06.2015ರಂದು ನಿವೃತ್ತಿ ಹೊಂದಿದ್ದು, ಬೆಳಗಾವಿ ಜಿಲ್ಲಾ ನ್ಯಾಯಾಲಯದ ದಾವೆ ಸಂಖ್ಯೆ 77/2006ರಲ್ಲಿ ಈ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ದಿನಾಂಕ 11.09.2017ರಿಂದ ಕಾರಾಗೃಹ ವಾಸ ಅನುಭವಿಸುತ್ತಿದ್ದಾರೆ. ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಎದುರುದಾರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಎದುರುದಾರರಾದ ಶ್ರೀ ಎಂ.ಬಿ.ಪಾಟೀಲ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕಂಗ್ರಾಳಿ ಬಿ.ಕೆ. ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಹಾಗೂ ಸದರಿ ನೌಕರರು ನಿವೃತ್ತಿ ಹೊಂದಿರುವುದರಿಂದ ಕ.ನಾ.ಸೇ.ನಿ. 214(2)(ಬಿ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಎಂ.ಬಿ.ಪಾಟೀಲ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕಂಗ್ರಾಳಿ ಬಿ.ಕೆ. ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 487 ಗ್ರಾಪಂಕಾ 2018, ಬೆಂಗಳೂರು, ದಿನಾಂಕ 17.11.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಎಂ.ಬಿ.ಪಾಟೀಲ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕಂಗ್ರಾಳಿ ಬಿ.ಕೆ. ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸರ್ಕಾರವು ಮಂಜೂರಾತಿ ನೀಡಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ನಿಯಮ-214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

19/11/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಜಿಲ್ಲೆ,
5) ಕಾರ್ಯನಿರ್ವಾಹಕ ಅಧಿಕಾರಿ, ಖಾನಾಪುರ ತಾಲ್ಲೂಕು ಪಂಚಾಯತಿ, ಖಾನಾಪುರ, ಬೆಳಗಾವಿ ಜಿಲ್ಲೆ, (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ ಸ್ವೀಕೃತಿಯನ್ನು ಸರ್ಕಾಕ್ಕೆ ಸಲ್ಲಿಸಲು ತಿಳಿಸಿದೆ)
6) ಶ್ರೀ ಎಂ.ಬಿ.ಪಾಟೀಲ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕಂಗ್ರಾಳಿ ಬಿ.ಕೆ. ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ
7) ಗಣಕ ಕೋಶ – ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.